# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 16 :2020-21 ದಿನಾಂಕ: 04.06.2021

**ಬಾಗಲಗುಂಟೆ ವಾರ್ಡ್-14ರ ವಾರ್ಡ್ ಸಭೆಯ (Ward Decentralized Traige and Emergency Response (DETER) Committee for COVID-19) ನಡವಳಿ**

ದಿ.04.06.2021 ರಂದು ಬೆಳಗ್ಗೆ 11.30 ಗಂಟೆಗೆ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀ.ಮೋಹನ್, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
2. ಶ್ರೀ.ಶಿವಲಿಂಗೇಗೌಡ, ತೋಟಗಾರಿಕೆ ಇಲಾಖೆ, ಬಿಬಿಎಂಪಿ, ಬಾಗಲಗುಟೆ
3. ಡಾ॥ ಚಂದನ, ಕೋವಿಡ್ ಮೆಡಿಕಲ್ ಆಫೀಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ
4. ಡಾ॥ ವರುಣ್ ಕುಮಾರ್, ಕೋವಿಡ್ ಮೆಡಿಕಲ್ ಆಫೀಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ
5. ಶ್ರೀ.ಗಣೇಶ್ ಡಿ.ಎಂ. ಸೆಕ್ಟರ್ ಆಫೀಸರ್ ಬಾಗಲಗುಂಟೆ
6. ಶ್ರೀ.ಸಂಪದ ಕೆರಿಮನಿ, ಸೆಕ್ಟರ್ ಆಫೀಸರ್ ಬಾಗಲಗುಂಟೆ
7. ಶ್ರೀ.ಕೃಷ್ಣಮೂರ್ತಿ ಬಿ, ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ
8. ಶ್ರೀ.ಲಕ್ಷ್ಮಿ ವೆಂಕಟೇಶ್, ಮುನಿಕೊಂಡಪ್ಪ ಬಡಾವಣೆ, ನಾಗರೀಕ ಹಿತ ರಕ್ಷಣಾ ಸಮಿತಿ.
9. ಶ್ರೀ.ಮುದ್ದ ಹನುಮೇಗೌಡರು ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ
10. ಶ್ರೀ. ಸದಾಶಿವ, ನಾಗರೀಕ ಹಿತ ರಕ್ಷಣಾ ಸಮಿತಿ.
11. ಶ್ರೀ.ಗುರುಪ್ರಸಾದ್, ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

## A. ವಾರ್ಡ್ ಮಟ್ಟದಲ್ಲಿ WDC (Ward Decentralized Triage and Emergency Response (DETER) Committee for Covid 19 Management) ಸಮಿತಿ.

ನೋಡಲ್ ಅಧಿಕಾರಿ ರವರು ಮಾತನಾಡಿ ಸರ್ಕಾರದ ಆದೇಶ ಸಂಖ್ಯೆ No: RD 158 TNR 2020 (1) ದಿನಾಂಕ: 07.05.2021 ರಲ್ಲಿ ಬೆಂಗಳೂರಿನಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣಕ್ಕೆ ಸಂಬಂಧಿಸಿದಂತೆ ತೆಗೆದುಕೊಳ್ಳಬೇಕಾದ ಕ್ರಮ ಹಾಗೂ ಈ ಕುರಿತು ವಲಯ ಮಟ್ಟದಲ್ಲಿ Covid Care Center, Triage ಕೇಂದ್ರವನ್ನು ಈಗಾಗಲೇ ಮಂಜುನಾಥನಗರದ ಕಾರ್ಮಿಕರ ಭವನದಲ್ಲಿ ಸ್ಥಾಪಿಸಲಾಗಿದ್ದು, ಸುಮಾರು 130 ಹಾಸಿಗೆಗಳ ವ್ಯವಸ್ಥೆಯನ್ನು ಮಾಡಲಾಗಿದ್ದು, ವ್ಯವಸ್ಥಿತವಾಗಿ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ನೋಡೆಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.



Scanned by CamScanner

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿದ್ದು, ಸದ[illegible] ಪ್ರಕರಣಗಳ ಗಂಭೀರತೆಯನ್ನು ಆಧರಿಸಿ ಚಿಕಿತ್ಸೆಗೆ ಶಿಫಾರಸ್ಸು ಮಾಡುವ ಉದ್ದೇಶದಿಂದ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ವಾರ್ಡ್ ನಂ. 13ರ ಇಂದಿರಾ ಕ್ಯಾಂಟೀನ್ ಪಕ್ಕದಲ್ಲಿ ಬಿಬಿಎಂಪಿ ವತಿಯಿಂದ ನೂತನವಾಗಿ ನಿರ್ಮಿಸಿರುವ ಡಯಾಲಿಸಿಸ್ ಕಟ್ಟಡಕ್ಕೆ ನೀರು ಸರಬರಾಜು, ಒಳ ಚರಂಡಿ ಮತ್ತು ವಿದ್ಯುತ್ ಸಂಪರ್ಕ ಇತ್ಯಾದಿ ಮೂಲಭೂತ ಸೌಕರ್ಯಗಳು ಒದಗಿಸಿಕೊಂಡು Triage ಕೇಂದ್ರ ಸ್ಥಾಪಿಸಲಾಗಿದ್ದು, ದಿನಾಂಕ: 20.05.2021 ರಂದು ಸನ್ಮಾನ್ಯ ಶ್ರೀ.ಆರ್.ಮಂಜುನಾಥ್, ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ ರವರ ಅಧ್ಯಕ್ಷತೆಯಲ್ಲಿ Triage ಕೇಂದ್ರ ಸ್ಥಾಪಿಸಿದ್ದು, ಎಲ್ಲಾ ರೀತಿಯ ವ್ಯವಸ್ಥೆಗಳನ್ನು ಮಾಡಿದ್ದು, ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆ ಎಂಬುದಾಗಿ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು ಹಾಗೂ Triage ಕೇಂದ್ರದಲ್ಲಿ ಒಬ್ಬರು DTP Operator Appontment ಮಾಡಿ ದಾಖಲಾಗಲು ಬರುವ ಸೋಂಕಿತರಿಗೆ ನೇರವಾಗಿ ಹಾಸಿಗೆಗಳನ್ನು ಕಾಯ್ದಿರಿಸುವ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ಹಾಗೂ ವಾರ್ಡ್‌ನಲ್ಲಿ ಸ್ಥಾಪಿಸಿರುವ Triage ಕೇಂದ್ರ ಹಾಗೂ ಕೋವಿಡ್ ಆರೈಕಾ ಕೇಂದ್ರವನ್ನು ಕೋವಿಡ್-19 ಸಾಂಕ್ರಾಮಿಕ ರೋಗದ 3ನೇ ಅಲೆಯು ಪ್ರಾರಂಭವಾಗುವ ಸಾಧ್ಯತೆ ಇರುವುದರಿಂದ ಎರಡೂ ಸೆಂಟರ್‌ನ್ನು ಮುಂದುವರೆಸಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

(**ಕ್ರಮ:** ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ ವಲಯ)

**B. ಕೋವಿಡ್‌ಗೆ ಸಂಬಂಧಿಸಿದಂತೆ, ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸಲು ಸ್ವಯಂ ಸೇವಕರು ರವರುಗಳನ್ನು ನಿಯೋಜಿಸಿಕೊಳ್ಳುವ ಬಗ್ಗೆ:-**

ಸರ್ಕಾರದ ಆದೇಶದಲ್ಲಿ ಸ್ವಯಂ ಸೇವಕರ ಪಾತ್ರ /ಕರ್ತವ್ಯದ ಬಗ್ಗೆ ವಿವರಿಸಿರುವುದನ್ನು ಸಭೆಯಲ್ಲಿ ಚರ್ಚಿಸಲಾಯಿತು. ವಾರ್ಡ್ ವ್ಯಾಪ್ತಿಯ ಪ್ರತಿ ಬಡಾವಣೆಯಲ್ಲಿ ಕನಿಷ್ಟ 10 ಜನ ಸ್ವಯಂ ಸೇವಕರನ್ನು ಗುರುತಿಸಿ, (ವಾರ್ಡ್ ವ್ಯಾಪ್ತಿಯಲ್ಲಿ ಕನಿಷ್ಟ 50) ಪಟ್ಟಿಯನ್ನು ನೀಡುವಂತೆ ವಾರ್ಡ್ ಸಭೆಯ ಸದಸ್ಯರಿಗೆ ತಿಳಿಸಲಾಗಿತ್ತು. ಅದರಂತೆ ಸಮಿತಿ ಸದಸ್ಯರು ಸ್ವಯಂ ಸೇವಕರುಗಳಿಂದ ಪಡೆದ ಹೆಸರುಗಳನ್ನು ನೀಡಿರುತ್ತಾರೆ ಹಾಗೂ ಎಲ್ಲಾ ಸ್ವಯಂ ಸೇವಕರುಗಳನ್ನು ಒಳಗೊಂಡಂತೆ ವಾಟ್ಸ್ ಆಪ್ ಗ್ರೂಪ್ ರಚಿಸಿದ್ದು, ಎಲ್ಲರೂ ಸಾರ್ವಜನಿಕರಿಗೆ ಅವಶ್ಯವಿರುವ ಆಹಾರದ ಕಿಟ್, ಊಟದ ವ್ಯವಸ್ಥೆ ಇತ್ಯಾದಿ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆ.

**C. ಇತರೆ ವಿಷಯಗಳ ಬಗ್ಗೆ.**

1. ಕೋವಿಡ್ ನಿಯಂತ್ರಣದ ಕುರಿತು ಜಾಗೃತಿ ಮೂಡಿಸಲು ನಿಯೋಜಿಸಲಾಗಿರುವ ಸೆಕ್ಟರ್ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ ತಮಗೆ ಮತ್ತು ಬಿ.ಎಲ್.ಓ ಗಳಿಗೆ ತಮ್ಮ ಕರ್ತವ್ಯದ ಅವಧಿಯಲ್ಲಿ ಉಪಯೋಗಿಸಲು ಮಾಸ್ಕ್, ಸ್ಯಾನಿಟೈಸರ್ ಇತ್ಯಾದಿಗಳನ್ನು ಒದಗಿಸಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿದರು.

(ಕ್ರಮ: ಆರೋಗ್ಯ ವೈದ್ಯಾಧಿಕಾರಿಗಳು / ಹಿರಿಯ ಆರೋಗ್ಯ ಪರಿವೀಕ್ಷಕರು)

2. ವಾರ್ಡ್ ವ್ಯಾಪ್ತಿಯಲ್ಲಿ ಲಸಿಕೆ ನೀಡುತ್ತಿರುವ ಬಗ್ಗೆ.

ಹಾಲಿ ಎಂ.ಇ.ಐ ಮೈದಾನದಲ್ಲಿ ಸಾರ್ವಜನಿಕರಿಗೆ ಲಸಿಕೆ ನೀಡುತ್ತಿರುವ ಕಾರ್ಯಕ್ರಮ ಸಮರ್ಪಕವಾಗಿ ನಡೆಯುತ್ತಿರುವುದಾಗಿ ಸಭೆಯಲ್ಲಿ ಶ್ರೀ.ಡಾ||ವರುಣ್ ಕುಮಾರ್ ರವರು ತಿಳಿಸಿದರು ಹಾಗೂ ಲಸಿಕಾ ಕಾರ್ಯಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ವಾಟ್ಸ್ ಆಪ್ ಗ್ರೂಪ್‌ನಲ್ಲಿ ಪ್ರಚುರಪಡಿಸುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು.

(ಕ್ರಮ:ಆರೋಗ್ಯ ವೈದ್ಯಾಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ)

Scanned by CamScanner

**D. ರಸ್ತೆಗುಂಡಿ ಹೂಳು ತೆಗೆಯುವುದು, ಕಸ ವಿಲೇವಾರಿ**

ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ರಸ್ತೆಗುಂಡಿ, ಹೂಳು ತೆಗೆಯುವ ಬಗ್ಗೆ ಮತ್ತು ಕಸ ವಿಲೇವಾರಿ ಬಗ್ಗೆ ಚರ್ಚಿಸಿ ಕಾಮಗಾರಿಗಳು ಪ್ರಾರಂಭವಾಗಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು.

ಪ್ರಸ್ತುತ ರಾಜ್ಯಾದ್ಯಂತ ಕೋವಿಡ್-19ಗೆ ಸಂಬಂಧಿಸಿದಂತೆ ಲಾಕ್‌ಡೌನ್ ಜಾರಿಯಾಗಿದ್ದು, ಕಾರ್ಮಿಕರ ಕೊರತೆ ಇರುವುದರಿಂದ ಕನಿಷ್ಟ ಸಂಖ್ಯೆಯ ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದು, ಆಧ್ಯತೆಯ ಮೇಲೆ ಕಾರ್ಯ ನಿರ್ವಹಿಸುತ್ತಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

ಕೆಲವು ಬಡಾವಣೆಗಳಲ್ಲಿ ಅಸಮರ್ಪಕ ಕಸವಿಲೇವಾರಿ ಕುರಿತು ವಾರ್ಡ್ ಸಮಿತಿ ಸಭೆಯಲ್ಲಿ ಸದಸ್ಯರುಗಳು ತಮ್ಮ ಅಸಮಧಾನ ವ್ಯಕ್ತಪಡಿಸಿದ್ದು, ಈ ಬಗ್ಗೆ ಕೂಡಲೇ ಕ್ರಮವಹಿಸುವಂತೆ ಆರೋಗ್ಯ ನಿರೀಕ್ಷಕರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

**(ಕ್ರಮ:ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು, ದಾಸರಹಳ್ಳಿ ಉಪ-ವಿಭಾಗ/ಹಿರಿಯ ಆರೋಗ್ಯ ನಿರೀಕ್ಷಕರು)**

04/06/2021

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 14, ಬಾಗಲಗುಂಟೆ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

04/06/2021

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**<u>ಅಧಿಕಾರಿಗಳ ಮಾಹಿತಿಗಾಗಿ:-</u>**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಛೇರಿ ಪ್ರತಿ.

Scanned by CamScanner